ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 1/10/2020

# ಬಾಬ್ರಿ ತೀರ್ಪು ಸತ್ಯಕ್ಕೆ ಸಂದ ಜಯ: ಬಿಎಸ್‌ವೈ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಾಬ್ರಿ ಮಸೀದಿ ಧ್ವಂಸ ಪ್ರಕರಣ ಸಂಬಂಧ ಸಿಬಿಐ ವಿಶೇಷ ನ್ಯಾಯಾಲಯ ನೀಡಿರುವ ತೀರ್ಪನ್ನು ಸ್ವಾಗತಿಸಿರುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಸತ್ಯಕ್ಕೆ ಸಂದ ಜಯ ಇದಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.



ಬುಧವಾರ ತಮ್ಮ ಗೃಹ ಕಚೇರಿಯಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಭಾರತೀಯರೆಲ್ಲರೂ ಸಂತೋಷ ಪಡುವ ಶುಭ ದಿನ ಇದಾಗಿದೆ. ಲಖನೌ ಸಿಬಿಐ ನ್ಯಾಯಾಲಯ ಐತಿಹಾಸಿಕ ತೀರ್ಪು ನೀಡಿದೆ. ಬಿಜೆಪಿ ಹಿರಿಯ ನಾಯಕರಾದ ಎಲ್.ಕೆ.ಅಡ್ವಾಣಿ, ಮುರಳಿ ಮನೋಹರ ಜೋಶಿ, ಉಮಾಭಾರತಿ ಸೇರಿ 32 ಮಂದಿಯನ್ನು ನಿರ್ದೋಷಿಗಳು ಎಂದು ತೀರ್ಪು ನೀಡಿದೆ. ಇದು ಉದ್ದೇಶಪೂರ್ವಕ ನಡೆದ ಕೃತ್ಯ ಅಲ್ಲ ಎಂದು ನ್ಯಾಯಾಲಯವು ಅಭಿಪ್ರಾಯಪಟ್ಟಿದೆ. ಸತ್ಯಕ್ಕೆ ಜಯ ಸಿಕ್ಕಿದೆ ಎಂದರು.

ನಾನು ಸಹ ಹೋರಾಟದಲ್ಲಿ ನೇರವಾಗಿ ಭಾಗಿಯಾಗಿದ್ದೆ. ನನಗೂ ವೈಯಕ್ತಿಕ ಸಂತೋಷ ತಂದಿದೆ. ಬಹಳ ಜನರು ತೀರ್ಪು ಯಾವ ರೀತಿ ಬರಲಿದೆ ಎಂದು ಕಾಯುತ್ತಿದ್ದರು. ಹೋರಾಟಕ್ಕೆ ಯಾವಾಗಲೂ ಗೆಲುವು ಸಿಗಲಿದೆ ಎನ್ನುವುದು ಸಾಬೀತಾಗಿದೆ. ಆ ದಿನ ಅಡ್ವಾಣಿ ಅವರ ಮಾಡಿದ್ದ ಭಾಷಣ ಯಾರೂ ಮರೆಯಲು ಸಾಧ್ಯವಿಲ್ಲ. ಅಯೋಧ್ಯೆಯಲ್ಲಿ ಈಗಾಗಲೇ ರಾಮಮಂದಿರ ನಿರ್ಮಾಣಕ್ಕೆ ಕೆಲಸ ಆರಂಭವಾಗಿದೆ. ಇದಕ್ಕೆ ಅಡ್ವಾಣಿ, ಮುರಳಿ ಮನೋಹರ ಜೋಶಿ ಅವರಂತಹ ಹಲವು ಮಂದಿಯ ಹೋರಾಟ ಕಾರಣವಾಗಿದೆ ಎಂದು ಯಡಿಯೂರಪ್ಪ ಹೇಳಿದರು.



ಬಾಬರಿ ಮಸೀದಿ ಧ್ವಂಸ ಪ್ರಕರಣದ ಪೂರ್ವ ನಿಯೋಜಿತ ಕೃತ್ಯ ಎಂಬುದಕ್ಕೆ ಸಾಕ್ಷ್ಯಗಳಿಲ್ಲ ಎಂದು ಸಿಬಿಐ ವಿಶೇಷ ನ್ಯಾಯಾಲಯದಿಂದ ಐತಿಹಾಸಿಕ ತೀರ್ಪು ಹೊರಬಿದ್ದಿದೆ. ಅಡ್ವಾಣಿ, ಮುರಳಿ ಮನೋಹರ ಜೋಶಿ ಸೇರಿದಂತೆ ಉಳಿದ ನಾಯಕರು ದೋಷಮುಕ್ತರಾಗಿದ್ದಾರೆ. ಈ ಮಹತ್ವದ ತೀರ್ಪನ್ನು ಸ್ವಾಗತಿಸೋಣ.

• **ನಳಿನ್ ಕುಮಾರ್ ಕಟೀಲ್** ಬಿಜೆಪಿ ರಾಜ್ಯಾಧ್ಯಕ್ಷ

ಲಖನೌದ ಸಿಬಿಐ ನ್ಯಾಯಾಲಯವು ತೀರ್ಪು ನೀಡಿರುವುದು ಸ್ವಾಗತಾರ್ಹ. 28 ವರ್ಷಗಳ ನಂತರ ಅಡ್ವಾಣಿಯವರು ಆರೋಪ ಮುಕ್ತರಾಗಿದ್ದು ಮತ್ತು ಸುಪ್ರೀಂಕೋರ್ಟ್ ರಾಮಮಂದಿರ ನಿರ್ಮಾಣಕ್ಕೆ ಅನುಮತಿ ನೀಡಿರುವುದು ಐತಿಹಾಸಿಕ ತೀರ್ಪಾಗಿರುತ್ತದೆ.

• **ಬಸವರಾಜ ಬೊಮ್ಮಾಯಿ** ಗೃಹ ಸಚಿವ

ನಿಜಕ್ಕೂ ಈ ದಿನವನ್ನು ಭಾರತದ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡಬೇಕಾಗಿದೆ. ನಾನು ಈ ತೀರ್ಪನ್ನು ತುಂಬು ಹೃದಯದಿಂದ ಸ್ವಾಗತ ಮಾಡುತ್ತೇನೆ.

• **ಡಾ.ಸಿ.ಎನ್.ಅಶ್ವತ್ಥನಾರಾಯಣ** ಉಪಮುಖ್ಯಮಂತ್ರಿ

## ಪಟ್ಟಭದ್ರರಿಗೆ ಮುಖಭಂಗ

ಸತ್ಯ ಎಂದಿಗೂ ಸತ್ಯವೇ, ಬಿಜೆಪಿ ಸಹ ಇದನ್ನೇ ಮೊದಲಿನಿಂದಲೂ ಪ್ರತಿಪಾದಿಸುತ್ತಿತ್ತು. ಈಗ ನ್ಯಾಯದೇವತೆಯೂ ನಮ್ಮ ನಂಬಿಕೆಯನ್ನು ಪುರಸ್ಕರಿಸಿದಂತಾಗಿದೆ. ನಮ್ಮ ಪಕ್ಷದ ಹಿರಿಯರನ್ನು ಈ ಪ್ರಕರಣದ ಷಡ್ಯಂತ್ರದಲ್ಲಿ ಸಿಲುಕಿಸುವ ದೊಡ್ಡ ರಾಜಕೀಯ ಹುನ್ನಾರವೇ ನಡೆದಿತ್ತು. ಆದರೆ ಈ ನ್ಯಾಯ ನಿರ್ಣಯದಿಂದಾಗಿ ಪಟ್ಟಭದ್ರರಿಗೆ ಮುಖಭಂಗವಾಗಿದೆ.

• **ರಮೇಶ ಜಾರಕಿಹೊಳಿ,** ಜಲಸಂಪನ್ಮೂಲ ಸಚಿವ

## ಭಾರತೀಯರ ಗೆಲುವು

ಬಾಬರಿ ಪ್ರಕರಣದ ಬಗ್ಗೆ ಸಿಬಿಐ ಕೋರ್ಟ್ ನೀಡಿದ ತೀರ್ಪ ಸಮಸ್ತ ಭಾರತೀಯರ ಗೆಲುವು. ಬಾಬರ್‌ನ ಆಕ್ರಮಣದ ಕುರುಹು ಗುಮ್ಮಟ ಬಿದ್ದ ಬಗ್ಗೆ ನಮ್ಮ ನಾಯಕರ ಮೇಲೆ ಹಾಕಿದ ಪೂರ್ವ ನಿಯೋಜಿತ ಸಂಚು ಕೇಸಿನ ಬಗ್ಗೆ ಸಿಬಿಐ ನಮ್ಮ ಎಲ್ಲ ನಾಯಕರನ್ನು ನಿರ್ದೋಷಿಗಳೆಂದು ಐತಿಹಾಸಿಕ ತೀರ್ಪು ನೀಡಿರುವುದು ಸಂತಸವಾಗಿದೆ.

• **ಬಸನಗೌಡ ಪಾಟೀಲ ಯತ್ನಾಳ** ಶಾಸಕ

## ನ್ಯಾಯಯುತ ತೀರ್ಪು

ಸಿಬಿಐ ವಿಶೇಷ ನ್ಯಾಯಾಲಯವು ಅಯೋಧ್ಯೆಯ ಬಾಬ್ರಿ ಮಸೀದಿ ಧ್ವಂಸ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಯುತ ತೀರ್ಪು ನೀಡಿದೆ. ನ್ಯಾಯಾಧೀಶರು ಪರಿಪೂರ್ಣವಾಗಿ ಎಲ್ಲ ಅಂಶಗಳನ್ನು ಸುದೀರ್ಘವಾಗಿ ಅವಲೋಕನ ಮಾಡಿದ್ದಾರೆ. ಎಲ್ಲರನ್ನೂ ನ್ಯಾಯಾಲಯವೇ ಆರೋಪದಿಂದ ಮುಕ್ತಗೊಳಿಸಿದ ಈ ತೀರ್ಪನ್ನು ನಾನು ಮನಃಪೂರ್ವಕವಾಗಿ ಸ್ವಾಗತಿಸುತ್ತೇನೆ.

• **ವಿಶ್ವೇಶ್ವರ ಹೆಗಡೆ ಕಾಗೇರಿ** ಸ್ಪೀಕರ್

## ತೀರ್ಪನ್ನು ಸ್ವಾಗತಿಸುತ್ತೇನೆ

ಬಾಬ್ರಿ ಮಸೀದಿ ಧ್ವಂಸ ಪ್ರಕರಣದಲ್ಲಿ ನ್ಯಾಯಾಲಯ ಸತ್ಯವನ್ನು ಎತ್ತಿ ಹಿಡಿದಿದೆ. ಪೂರ್ವಯೋಜಿತ ಸಂಚು ಅಲ್ಲ ಎಂಬುದು ನ್ಯಾಯಾಲಯದ ತೀರ್ಪಿನಿಂದ ಹೊರಬಿದ್ದಿದೆ. ಈ ತೀರ್ಪನ್ನು ಸ್ವಾಗತಿಸುತ್ತೇನೆ. ಬಿಜೆಪಿಯ ಅಜೆಂಡಾದಲ್ಲಿ ಮಸೀದಿ ಒಡೆಯುವುದು ಇರಲಿಲ್ಲ. ಅಂದು ಬಿಜೆಪಿಯ ನಾಲ್ಕು ಸರ್ಕಾರಗಳನ್ನು ವಜಾ ಮಾಡಿದ ಕಾಂಗ್ರೆಸ್ ಪಕ್ಷ ಇದೀಗ ದೇಶದ ಜನತೆಯ ಕ್ಷಮೆ ಕೇಳಲಿ.

• **ಸಿ.ಟಿ.ರವಿ** ಪ್ರವಾಸೋದ್ಯಮ ಸಚಿವ

## ತೀರ್ಪಿನಿಂದ ಸಂತಸವಾಗಿದೆ

ಕೋರ್ಟ್ ಆದೇಶದಿಂದ ನಮಗೆ ಬಹಳ ಸಂತೋಷವಾಗಿದೆ. ನಮ್ಮ ಧಾರ್ಮಿಕ, ಸಾಮಾಜಿಕ ನಾಯಕರ ಮೇಲೆ ಆರೋಪಗಳನ್ನು ಹೊರಿಸಿ, ಅವರನ್ನು ಹತ್ತಿಕ್ಕುತ್ತೇವೆ ಎನ್ನುವುದು ಸುಳ್ಳಾಗಿದೆ. ಸತ್ಯಮೇವ ಜಯತೆ ಎಂಬ ಮಾತು ಈ ತೀರ್ಪಿನಿಂದ ಮತ್ತೊಮ್ಮೆ ಸಾಬೀತಾಗಿದೆ.

• **ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ** ಪೇಜಾವರ ಮಠ

## ಸತ್ಯ ಎತ್ತಿ ಹಿಡಿದ ಕೋರ್ಟ್

ಬಾಬ್ರಿ ಮಸೀದಿ ಧ್ವಂಸ ಪ್ರಕರಣದ ಅಂತಿಮ ತೀರ್ಪು ಹೊರಬಿದ್ದಿದೆ. ವಿಶೇಷ ನ್ಯಾಯಾಲಯ ಪ್ರಕರಣದ 32 ಆರೋಪಿಗಳನ್ನು ನಿರ್ದೋಷಿಗಳೆಂದು ಪ್ರಕಟಿಸಿದೆ. ಸತ್ಯವನ್ನು ನ್ಯಾಯಾಲಯ ಎತ್ತಿ ಹಿಡಿದಿದೆ. ನ್ಯಾಯಾಲಯದ ತೀರ್ಪನ್ನು ಸ್ವಾಗತಿಸುತ್ತೇನೆ.

• **ಜಗದೀಶ ಶೆಟ್ಟರ್** ಕೈಗಾರಿಕಾ ಸಚಿವ

## ತೀರ್ಪು ಸ್ಫೂರ್ತಿದಾಯಕ

ತೀರ್ಪು ಸ್ಫೂರ್ತಿದಾಯಕವಾಗಿದೆ. ಈ ತೀರ್ಪು ಮಥುರೆಯಲ್ಲಿನ ಶ್ರೀ ಕೃಷ್ಣ ಮಂದಿರ ನಿರ್ಮಾಣದ ಹೋರಾಟಕ್ಕೆ ಸ್ಫೂರ್ತಿಯಾಗಲಿದೆ. ಗುಲಾಮತನದ ಮನೋಭಾವನೆಯಿಂದ ಹೊರಬಂದು ರಾಷ್ಟ್ರೀಯವಾದಿಗಳಿಗೆ ಜಯ ನೀಡಿದ ತೀರ್ಪು ಇದಾಗಿದೆ.

• **ಕೆ.ಎಸ್.ಈಶ್ವರಪ್ಪ** ಗ್ರಾಮೀಣಾಭಿವೃದ್ಧಿ ಸಚಿವ

## ಹುನ್ನಾರವೇ ನಡೆದಿತ್ತು

ಎಲ್.ಕೆ.ಅಡ್ವಾಣಿ, ಮುರಳಿ ಮನೋಹರ ಜೋಶಿ, ಕಲ್ಯಾಣ್‌ಸಿಂಗ್, ಉಮಾ ಭಾರತಿ, ವಿನಯ್ ಕಟಿಯಾರ ಮುಂತಾದವರನ್ನು ಈ ಪ್ರಕರಣದ ಷಡ್ಯಂತ್ರದಲ್ಲಿ ಸಿಲುಕಿಸುವ ದೊಡ್ಡ ರಾಜಕೀಯ ಹುನ್ನಾರವೇ ನಡೆದಿತ್ತು. ಆದರೆ ಈ ತೀರ್ಪಿನಿಂದಾಗಿ ಪಟ್ಟಭದ್ರರಿಗೆ ಮುಖಭಂಗವಾಗಿದೆ.

• **ಲಕ್ಷ್ಮಣ ಸವದಿ** ಉಪಮುಖ್ಯಮಂತ್ರಿ